ಕರ್ನಾಟಕ ಸರ್ಕಾರ
ರಾಷ್ಟ್ರೀಯ ಸೇವಾ ಯೋಜನಾ ಕೋಶ,
ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ

ಸಂಖ್ಯೆ:ಯುಸೇಇ/ರಾಸೇಯೋ/23/2024-25/69

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 15.06.2024

ಇವರಿಗೆ,

ಕುಲಪತಿಗಳು/ಕುಲಸಚಿವರು/ನಿರ್ದೇಶಕರು,
ಎಲ್ಲಾ ವಿಶ್ವವಿದ್ಯಾಲಯ/ನಿರ್ದೇಶನಾಲಯಗಳು.

ಮಾನ್ಯರೇ,

ವಿಷಯ: 2022-23 ರ ರಾಷ್ಟ್ರೀಯ ಸೇವಾ ಯೋಜನೆಯ ರಾಷ್ಟ್ರ ಪ್ರಶಸ್ತಿ ಮತ್ತು ರಾಜ್ಯ ಪ್ರಶಸ್ತಿಯ ಪ್ರಸ್ತಾವನೆಗಳನ್ನು ಕಳುಹಿಸಿಕೊಡುವ ಬಗ್ಗೆ.

***

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, 2022-23 ರ ರಾಷ್ಟ್ರೀಯ ಸೇವಾ ಯೋಜನೆಯ ಪ್ರಶಸ್ತಿಗಾಗಿ ಕೇಂದ್ರ ಸರ್ಕಾರವು ಪ್ರಸ್ತಾವನೆಗಳನ್ನು ಆಹ್ವಾನಿಸುತ್ತದೆ. ರಾಜ್ಯ ಸರ್ಕಾರವೂ ಸಹ ರಾಜ್ಯ ಪ್ರಶಸ್ತಿಗಳಿಗೆ ಪ್ರಸ್ತಾವನೆಯನ್ನು ಅಹ್ವಾನಿಸಿದೆ.

ಅದರಂತೆ, ವಿಶ್ವವಿದ್ಯಾಲಯ/ನಿರ್ದೇಶನಾಲಯಗಳಿಂದ ರಾಷ್ಟ್ರೀಯ ಸೇವಾ ಯೋಜನೆಯ "2022-23ರ ರಾಷ್ಟ್ರೀಯ ಸೇವಾ ಯೋಜನೆಯ ಪ್ರಶಸ್ತಿಗಳಾದ (1) ಅತ್ಯುತ್ತಮ ವಿಶ್ವವಿದ್ಯಾಲಯ/ನಿರ್ದೇಶನಾಲಯ , (2) ಅತ್ಯುತ್ತಮ ಕಾರ್ಯಕ್ರಮಾಧಿಕಾರಿ ಹಾಗೂ ಘಟಕ ಮತ್ತು (3) ಅತ್ಯುತ್ತಮ ಸ್ವಯಂಸೇವಕ/ಸೇವಕಿ ಇವರ ಆಯ್ಕೆಗಾಗಿ ಪ್ರಸ್ತಾವನೆಗಳನ್ನು ಕಡ್ಡಾಯವಾಗಿ ನಿಗಧಿತ ನಮೂನೆಯಂತೆ ಆಂಗ್ಲ ಭಾಷೆಯಲ್ಲಿ 100 ಪುಟಗಳಿಗೆ ಮೀರದಂತೆ ಪ್ರತ್ಯೇಕವಾಗಿ ಕಳುಹಿಸಿಕೊಡಲು ಸೂಚಿಸಿದೆ. **ಹಾಗೂ 100 ಪುಟಗಳಿಗಿಂತ ಹೆಚ್ಚಾಗಿದ್ದಲ್ಲಿ, ಪ್ರಸ್ತಾವನೆಯನ್ನು ತಿರಸ್ಕರಿಸಲಾಗುವುದು.**

ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ ವಿಶ್ವವಿದ್ಯಾಲಯ/ನಿರ್ದೇಶನಾಲಯ ಮಟ್ಟದಲ್ಲಿ ಕುಲಪತಿಗಳ/ನಿರ್ದೇಶಕರ ಅಧ್ಯಕ್ಷತೆಯಲ್ಲಿ ಆಯ್ಕೆ ಸಮಿತಿಯನ್ನು ರಚಿಸಿ, ಪ್ರಸ್ತಾವನೆಗಳನ್ನು ಪರಿಶೀಲಿಸಿ ಆಯ್ಕೆ ಮಾಡತಕ್ಕದ್ದು. ಒಂದು ವಿಶ್ವವಿದ್ಯಾಲಯ/ನಿರ್ದೇಶನಾಲಯದಿಂದ ರಾಷ್ಟ್ರ ಮತ್ತು ರಾಜ್ಯ ಪ್ರಶಸ್ತಿಗೆ ತಲಾ ಒಬ್ಬರು ಮಹಿಳಾ ಕಾರ್ಯಕ್ರಮಾಧಿಕಾರಿ, ಒಬ್ಬರು ಪುರುಷ ಕಾರ್ಯಕ್ರಮಾಧಿಕಾರಿ, ಒಬ್ಬರು ಮಹಿಳಾ ಸ್ವಯಂ ಸೇವಕಿ, ಒಬ್ಬರು ಪುರುಷ ಸ್ವಯಂಸೇವಕರ ಅಯ್ಕೆಯಾದ ಪ್ರಸ್ತಾವನೆಗಳನ್ನು ಆಯ್ಕೆ ಸಮಿತಿಯ ನಡಾವಳಿಯ ಪ್ರತಿಯೊಂದಿಗೆ **ದಿನಾಂಕ:15.07.2024** ರಂದು ಸಲ್ಲಿಸತಕ್ಕದು.

ರಾಷ್ಟ್ರೀಯ ಸೇವಾ ಯೋಜನೆಯ ರಾಜ್ಯ ಪ್ರಶಸ್ತಿಯ ಪ್ರಸ್ತಾವನೆಗಳನ್ನು ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು ಇವರಿಂದ ಮಾತ್ರ 3 ಪುರುಷ ಹಾಗೂ 03 ಮಹಿಳಾ ಕಾರ್ಯಕ್ರಮ ಅಧಿಕಾರಿಗಳಿಗೆ ಮತ್ತು 04 ಪುರುಷ ಹಾಗೂ 04 ಮಹಿಳಾ ಸ್ವಯಂಸೇವಕರ ಪ್ರಸ್ತಾವನೆಗಳನ್ನು ಸಲ್ಲಿಸಲು ಅವಕಾಶ ನೀಡಲಾಗಿದೆ. ಕಾರಣ 80,000ಕ್ಕೂ ಹೆಚ್ಚಿನ ಸ್ವಯಂಸೇವಕರು ಇರುವುದರಿಂದ ಈ ಅವಕಾಶವನ್ನು ನೀಡಲಾಗಿದೆ.

ರಾಷ್ಟ್ರೀಯ ಸೇವಾ ಯೋಜನೆಯ ರಾಷ್ಟ್ರ ಪ್ರಶಸ್ತಿ ಮತ್ತು ರಾಜ್ಯ ಪ್ರಶಸ್ತಿಯ ಪ್ರಸ್ತಾವನೆಗಳನ್ನು ಆಯ್ಕೆ ಮಾಡುವಾಗ ಈ ಕೆಳಗಿನ ಮಾಹಿತಿಗಳನ್ನು ಎಲ್ಲಾ ಸಂಯೋಜನಾಧಿಕಾರಿಗಳು ತಪ್ಪದೇ ಗಮನಿಸಲು ಕೋರಲಾಗಿದೆ.

1. ಪದವಿ ಕಾಲೇಜಿನಲ್ಲಿ ಎನ್.ಎಸ್.ಎಸ್ ಸ್ವಯಂಸೇವಕರು ಪ್ರಥಮ ಹಾಗೂ ದ್ವಿತೀಯ ವರ್ಷ ಪೂರೈಸಿ ಈಗ ತೃತೀಯ ಪದವಿಯಲ್ಲಿ ವ್ಯಾಸಂಗ ಮಾಡುತ್ತಿರುವ ಸ್ವಯಂಸೇವಕ/ಸೇವಕಿಯರು ಮಾತ್ರ ಅರ್ಜಿ ಸಲ್ಲಿಸಬಹುದು ಪದವಿ ಪೂರ್ವ ಮತ್ತು ಸ್ನಾತಕೋತ್ತರ ಪದವಿಯಲ್ಲಿ ಎನ್.ಎಸ್.ಎಸ್. ಎರಡು ವರ್ಷ ಪೂರೈಸಿರುವ ಸ್ವಯಂಸೇವಕ/ಸೇವಕಿಯರು ಅರ್ಜಿ ಸಲ್ಲಿಸಬಹುದು.

2. ನಿಗದಿತ ದಿನಾಂಕದೊಳಗೆ ಪ್ರಸ್ತಾವನೆಗಳನ್ನು ವಿಶ್ವವಿದ್ಯಾಲಯದಲ್ಲಿ ಆಯ್ಕೆ ಸಮಿತಿಯ ಸಭೆಯ ನಡಾವಳಿಯೊಂದಿಗೆ ಕಡ್ಡಾಯವಾಗಿ ಈ ಕಛೇರಿಗೆ ಕಳುಹಿಸಲು ಕೋರಲಾಗಿದೆ.

ಉಳಿದಂತೆ ಪತ್ರದ ಜೊತೆಗೆ ಲಗತ್ತಿಸಿದ ಕೇಂದ್ರ ಸರ್ಕಾರದ ಪತ್ರದಲ್ಲಿ ಸೂಚಿಸಿದಂತೆ ಸೂಚನೆಗಳನ್ನು ಪಾಲಿಸಲು ಕೋರಲಾಗಿದೆ.

"2022-23 ನೇ ಸಾಲಿನ ರಾಜ್ಯ ಪ್ರಶಸ್ತಿ"ಗಳಾದ ಅತ್ಯುತ್ತಮ ವಿಶ್ವವಿದ್ಯಾಲಯ/ನಿರ್ದೇಶನಾಲಯ, ಅತ್ಯುತ್ತಮ ಘಟಕ, ಅತ್ಯುತ್ತಮ ಕಾರ್ಯಕ್ರಮಾಧಿಕಾರಿ, ಮತ್ತು ಅತ್ಯುತ್ತಮ ಸ್ವಯಂ ಸೇವಕ/ಸೇವಕಿಯರ ಆಯ್ಕೆಗಾಗಿ ದಿನಾಂಕ:15.07.2024 ರೊಳಗೆ ಈ ಕೆಳಗಿನ ನಿಬಂಧನೆಗಳಿಗೆ ಒಳಪಟ್ಟು ಪ್ರಸ್ತಾವನೆಗಳನ್ನು ಕಳುಹಿಸಿಕೊಡಲು ಸೂಚಿಸಿದೆ. ಯಾವುದೇ ಕಾರಣಕ್ಕೂ ದಿನಾಂಕವನ್ನು ವಿಸ್ತರಿಸಲಾಗುವುದಿಲ್ಲ.

1. ರಾಷ್ಟ್ರ ಪ್ರಶಸ್ತಿ ಮತ್ತು ರಾಜ್ಯ ಪ್ರಶಸ್ತಿಗಳಿಗೆ ಒಂದೇ ರೀತಿಯ ಪ್ರಸ್ತಾವನೆಗಳಾದರೂ ಪ್ರತ್ಯೇಕ ಪ್ರಸ್ತಾವನೆಗಳನ್ನು ಸಲ್ಲಿಸಿ, ಪ್ರಸ್ತಾವನೆ ಯಾವ ಪ್ರಶಸ್ತಿಗೆ ಎಂಬುದನ್ನು ಸ್ಪಷ್ಟವಾಗಿ ನಮೂದಿಸಬೇಕು.
2. ರಾಜ್ಯ ಪ್ರಶಸ್ತಿ ಮತ್ತು ರಾಷ್ಟ್ರ ಪ್ರಶಸ್ತಿಗಳಿಗೆ ಕೇಂದ್ರ ಸರ್ಕಾರದ 'ಎನ್.ಎಸ್.ಎಸ್. ರಾಷ್ಟ್ರ ಪ್ರಶಸ್ತಿ'ಯ ಮಾನದಂಡಗಳನ್ನು ಬಳಸಲಾಗುವುದು.
3. ರಾಜ್ಯ ಪ್ರಶಸ್ತಿಯು ವಿಶ್ವವಿದ್ಯಾಲಯ/ನಿರ್ದೇಶನಾಲಯ ಮಟ್ಟಕ್ಕೆ 2 ಪ್ರಶಸ್ತಿಗಳನ್ನು ನೀಡಲಾಗುವುದು.
4. ಪದವಿ ಕಾಲೇಜುಗಳ ಸ್ವಯಂ ಸೇವಕ/ಸೇವಕಿಯರ ಪ್ರಸ್ತಾವನೆ ಕಳುಹಿಸುವಾಗ ಎನ್.ಎಸ್.ಎಸ್ ನಲ್ಲಿ 2 ವರ್ಷ ಪೂರೈಸಿರುವ, ಈಗ ತೃತೀಯ ಪದವಿಯಲ್ಲಿರುವ ಸ್ವಯಂಸೇವಕರ ಪ್ರಸ್ತಾವನೆಯನ್ನು ಮಾತ್ರ ಕಳುಹಿಸಬೇಕು.
5. ನಿರ್ದೇಶನಾಲಯ ಹಾಗೂ ಸ್ನಾತಕೋತ್ತರ ಪದವಿಗಳಲ್ಲಿ 2 ವರ್ಷ ಪೂರೈಸಿರುವ/ ಉತ್ತೀರ್ಣರಾಗಿರುವ ವಿದ್ಯಾರ್ಥಿಗಳ ಪ್ರಸ್ತಾವನೆಯನ್ನು ಕಳುಹಿಸಬಹುದು.
6. ಅತ್ಯುತ್ತಮ ವಿಶ್ವವಿದ್ಯಾಲಯ ಮತ್ತು ಘಟಕ ಸಂಬಂಧಿಸಿದಂತೆ ಪ್ರಶಸ್ತಿಗಳಿಗೆ ಪ್ರಸ್ತಾವನೆಯನ್ನು ಪರಿಶೀಲಿಸಿ ಸಂದರ್ಶನವನ್ನು ನಡೆಸಲಾಗುವುದು ಹಾಗೂ ವಿಶ್ವವಿದ್ಯಾಲಯ/ ನಿರ್ದೇಶನಾಲಯ ಗಳಿಗೆ ಭೇಟಿ ನೀಡಿ ಕಾರ್ಯಯೋಜನೆಯನ್ನು ಪರಿಶೀಲಿಸಲಾಗುವುದು. ರಾಜ್ಯ ಪ್ರಶಸ್ತಿಗೆ ಸಂಬಂಧಿಸಿದ ಮಾರ್ಗದರ್ಶಿ ಸೂತ್ರಗಳನ್ನು (Guidelines) ಈ ಪತ್ರದೊಂದಿಗೆ ಎಲ್ಲಾ ಕಾರ್ಯಕ್ರಮ ಸಂಯೋಜನಾಧಿಕಾರಿಗಳ ಇಮೇಲ್‌ಗೆ ಕಳುಹಿಸಲಾಗಿದೆ. ಹಾಗೂ ಭಾರತ ಸರ್ಕಾರದ ರಾಷ್ಟ್ರೀಯ ಸೇವಾ ಯೋಜನೆಯ ವೆಬ್ಸೈಟ್ ನಿಂದಲೂ ಪಡೆಯಬಹುದಾಗಿದೆ.

3...

7. ಸ್ವಯಂಸೇವಕರು ಪ್ರಸ್ತಾವನೆಯೊಂದಿಗೆ ತಮ್ಮ 2 ಭಾವಚಿತ್ರವನ್ನು ಕಡ್ಡಾಯವಾಗಿ ಲಗತ್ತಿಸತಕ್ಕದ್ದು. ಹಾಗೂ ಎನ್.ಎಸ್.ಎಸ್ ಸ್ವಯಂ ಸೇವಕ/ಸೇವಕಿಯರ ವಯೋಮಿತಿಯು ದಿನಾಂಕ:31.03.2023ಕ್ಕೆ 25 ವರ್ಷಗಳು ವಯೋಮಿತಿ ಮೀರಿರಬಾರದು. (ಪರಿಶಿಷ್ಟ ಜಾತಿ /ಪರಿಶಿಷ್ಟ ಪಂಗಡದ ಎನ್.ಎಸ್.ಎಸ್ ಸ್ವಯಂ ಸೇವಕ/ಸೇವಕಿಯರ ಗರಿಷ್ಠ ವಯೋಮಿತಿ 28 ವರ್ಷಗಳು).

8. ಕಾರ್ಯಕ್ರಮ ಆಧಿಕಾರಿಗಳು ತಮ್ಮ 2 ಭಾವಚಿತ್ರ ಹಾಗೂ ಕಾಲೇಜಿನ ಪ್ರಾಂಶುಪಾಲರ 2 ಭಾವಚಿತ್ರುವನ್ನು ಕಡ್ಡಾಯವಾಗಿ ಲಗತ್ತಿಸತಕ್ಕದ್ದು.

9. ಕಾರ್ಯಕ್ರಮ ಸಂಯೋಜನಾಧಿಕಾರಿಗಳು ತಮ್ಮ ಪ್ರಸ್ತಾವನೆಯಲ್ಲಿ ತಮ್ಮ ಹಾಗೂ ವಿಶ್ವವಿದ್ಯಾಲಯದ ಕುಲಪತಿಗಳ ಭಾವಚಿತ್ರವನ್ನು ಲಗತ್ತಿಸತಕ್ಕದ್ದು.

10. ಪ್ರಸ್ತಾವನೆಯೊಂದಿಗೆ ಮಾರ್ಗದರ್ಶಿ ಸೂತ್ರದಲ್ಲಿರುವ ನಿಗದಿತ ನಮೂನೆಯಲ್ಲಿ ಚೆಕ್‌ಲಿಸ್ಟನ್ನು ಕಡ್ಡಾಯವಾಗಿ ಕಳುಹಿಸಬೇಕು.

11. ಅಭ್ಯರ್ಥಿಗಳು ಕಡ್ಡಾಯವಾಗಿ ನಮೂನೆಯಲ್ಲಿ ತಮ್ಮ ಮೊಬೈಲ್ ಸಂಖ್ಯೆ ಮತ್ತು ಇ-ಮೇಲ್ ವಿಳಾಸ ಹಾಗೂ ಕುಲಸಚಿವರು/ನಿರ್ದೇಶಕರು/ಪ್ರಾಂಶುಪಾಲರ (ಅನ್ವಯವಾಗುವಂತೆ) ಮೊಬೈಲ್ ಸಂಖ್ಯೆ ಮತ್ತು ಇ-ಮೇಲ್ ವಿಳಾಸವನ್ನು ನಮೂದಿಸತಕ್ಕದ್ದು.

ಪ್ರಸ್ತಾವನೆಗಳನ್ನು ಕಳುಹಿಸುವಾಗ ಮೇಲಿನ ನಿಬಂಧನೆಗಳನ್ನು ಅನುಸರಿಸಲಾಗಿದೆಯೇ ಎಂಬುದನ್ನು ಖಚಿತಪಡಿಸಿಕೊಂಡು ಪ್ರಸ್ತಾವನೆಗಳನ್ನು ಕಳುಹಿಸಬೇಕು. ಈ ಬಗ್ಗೆ ಯಾವುದೇ ಮಾಹಿತಿ ಅಗತ್ಯವಿದ್ದಲ್ಲಿ ರಾಜ್ಯ ಎನ್.ಎಸ್.ಎಸ್. ಅಧಿಕಾರಿಗಳು ಇವರನ್ನು (ಮೊಬೈಲ್ ಸಂಖ್ಯೆ: 8217599573) ಸಂಪರ್ಕಿಸಬಹುದಾಗಿದೆ. ಕಾರ್ಯಕ್ರಮ ಸಂಯೋಜನಾಧಿಕಾರಿಗಳು ಹೆಚ್ಚಿನ ಮುತುವರ್ಜಿ ವಹಿಸಿ ತಮ್ಮ ವಿಶ್ವವಿದ್ಯಾಲಯಗಳಿಗೆ ಅತ್ಯುತ್ತಮ ಘಟಕ, ಕಾರ್ಯಕ್ರಮಾಧಿಕಾರಿ, ಸ್ವಯಂಸೇವಕ/ಸೇವಕಿಯರಿಗೆ ಪ್ರಶಸ್ತಿ ಬರುವಂತೆ ಸಹಕರಿಸಲು ಕೋರಲಾಗಿದೆ.

ಪ್ರಶಸ್ತಿಗೆ ಭಾರತ ಸರ್ಕಾರ ನಿಗಧಿಪಡಿಸಿದ ಮಾನದಂಡ ಹಾಗೂ ಪ್ರಪತ್ರಗಳ ಪ್ರತಿಯನ್ನು ಈ ಪತ್ರದೊಂದಿಗೆ ಲಗತ್ತಿಸಲಾಗಿದೆ.

ವಂದನೆಗಳೊಂದಿಗೆ,

ತಮ್ಮ ವಿಶ್ವಾಸಿ,

(ಡಾ.ಪ್ರತಾಪ್ ಲಿಂಗಯ್ಯ),
ರಾಜ್ಯ ಎನ್.ಎಸ್.ಎಸ್. ಅಧಿಕಾರಿ
ರಾಷ್ಟ್ರೀಯ ಸೇವಾ ಯೋಜನಾ ಕೋಶ,
ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ.

ಪ್ರತಿ:

1. ಮಾನ್ಯ ಅಪರ ಮುಖ್ಯ ಕಾರ್ಯದರ್ಶಿಗಳು, ಯುವ ಸಬಲೀಕರಣ ಮತ್ತು ಇಲಾಖೆ, ಕರ್ನಾಟಕ ಸರ್ಕಾರ.
2. ಪ್ರಾದೇಶಿಕ ನಿರ್ದೇಶಕರು, ಎನ್. ಎಸ್. ಎಸ್. ಪ್ರಾದೇಶಿಕ ಕಛೇರಿ, ಭಾರತ ಸರ್ಕಾರ, ಬೆಂಗಳೂರು.
3. ಕಾರ್ಯಕ್ರಮ ಸಂಯೋಜನಾಧಿಕಾರಿಗಳು, ರಾಷ್ಟ್ರೀಯ ಸೇವಾ ಯೋಜನೆ, ಎಲ್ಲಾ ವಿಶ್ವವಿದ್ಯಾಲಯ/ ನಿರ್ದೇಶನಾಲಯಗಳು.